**Akashvani: Bangalore**
**National Bulletin In Kannada**
**27.06.2026: 7.35AM**
**ಆಕಾಶವಾಣಿ, ಬೆಂಗಳೂರು**
**ರಾಷ್ಟ್ರೀಯ ವಾರ್ತೆಗಳು**
**27.06.2026: 7.35AM**

**********

**ಮುಖ್ಯಾಂಶಗಳು :**

1. ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಎರಡು ದಿನಗಳ ಕರ್ನಾಟಕ ಭೇಟಿ; ಬೆಂಗಳೂರಿನಲ್ಲಿಂದು ನಾಡಪ್ರಭು ಕೆಂಪೇಗೌಡರ ಜಯಂತ್ಯೋತ್ಸವದಲ್ಲಿ ಭಾಗಿ
2. ಇಂದಿನಿಂದ ಇದೇ ೨೯ರ ವರೆಗೆ ಪ್ರಧಾನಿ ನರೇಂದ್ರ ಮೋದಿ ಸೀಶೆಲ್ಸ್‌ಗೆ ಅಧಿಕೃತ ಪ್ರವಾಸ
3. ವೆನೆಜುವೆಲಾ ಭೀಕರ ಭೂಕಂಪ; ಮೃತರ ಸಂಖ್ಯೆ ೯೨೦ಕ್ಕೆ ಏರಿಕೆ; ಸುಮಾರು ೩ ಸಾವಿರದ ೩೦೦ ಮಂದಿ ಗಾಯಾಳು
4. ಇರಾನ್ ಪ್ರಮುಖ ನೆಲೆಗಳ ಮೇಲೆ ಅಮೆರಿಕ ವೈಮಾನಿಕ ದಾಳಿ; ಇರಾನ್ ಡ್ರೋಣ್ ದಾಳಿಗೆ ಪ್ರತ್ಯುತ್ತರ
5. ಎಫ್‌ಐಎಚ್ ಪುರುಷರ ಪ್ರೋಲೀಗ್ ಹಾಕಿ; ಪಾಕಿಸ್ತಾನದ ವಿರುದ್ಧ ಭಾರತಕ್ಕೆ ೭-೧ ಅಂತರದ ಭರ್ಜರಿ ಗೆಲುವು

**********

ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಅವರು ಇಂದಿನಿಂದ ಎರಡು ದಿನಗಳ ಕಾಲ ಕರ್ನಾಟಕ ಪ್ರವಾಸ ಕೈಗೊಳ್ಳಲಿದ್ದಾರೆ.ತಮ್ಮ ಈ ಪ್ರವಾಸದ ಅಂಗವಾಗಿ ಉಪರಾಷ್ಟ್ರಪತಿಯವರು ಇಂದು ಬೆಂಗಳೂರಿನಲ್ಲಿ ಆಯೋಜಿಸಲಾಗಿರುವ ನಾಡಪ್ರಭು ಕೆಂಪೇಗೌಡರ ೫೧೭ನೇ ಜಯಂತ್ಯುತ್ಸವದಲ್ಲಿ ಪಾಲ್ಗೊಳ್ಳಲಿದ್ದಾರೆ.ನಾಳೆ, ಬೆಂಗಳೂರಿನಲ್ಲಿ ನಡೆಯಲಿರುವ ನಶಾ ಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಭಾಗವಹಿಸಲಿದ್ದಾರೆ.ಈ ಸಮಾವೇಶವನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಹಾಗೂ ಅಂತಾರಾಷ್ಟ್ರೀಯ ಮಾದಕವಸ್ತು ವಿರೋಧಿ ಮತ್ತು ಅಕ್ರಮ ಸಾಗಣೆ ತಡೆ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದೆ.

**********

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದಿನಿಂದ ೨೯ರವರೆಗೆ ಸೀಶೆಲ್ಸ್ ದೇಶಕ್ಕೆ ಭೇಟಿ ನೀಡಲಿದ್ದು, ಸೀಶೆಲ್ಸ್ ರಾಷ್ಟ್ರೀಯ ದಿನದ ಸುವರ್ಣ ಮಹೋತ್ಸವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಭಾರತೀಯ ರಕ್ಷಣಾ ಪಡೆಗಳ ಒಂದು ತಂಡ ಮತ್ತು ಭಾರತೀಯ ನೌಕಾಪಡೆಯ ಎರಡು ಹಡಗುಗಳು ಈ ಆಚರಣೆಗಳಲ್ಲಿ ಭಾಗವಹಿಸಲಿವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಭೇಟಿಯ ಸಂದರ್ಭದಲ್ಲಿ, ಪ್ರಧಾನಮಂತ್ರಿ ಮೋದಿ ಅವರು ಸೀಶೆಲ್ಸ್ ಅಧ್ಯಕ್ಷ ಡಾ. ಪ್ಯಾಟ್ರಿಕ್ ಹರ್ಮಿನಿ ಅವರೊಂದಿಗೆ ಮಾತುಕತೆ ನಡೆಸಲಿದ್ದು, ದ್ವಿಪಕ್ಷೀಯ ಸಹಕಾರದ ವಿವಿಧ ಕ್ಷೇತ್ರಗಳನ್ನು ಪರಿಶೀಲಿಸುವ ಜೊತೆಗೆ ಪರಸ್ಪರ ಹಿತಾಸಕ್ತಿಯ ಪ್ರಾದೇಶಿಕ ಮತ್ತು ಅಂತಾರಾಷ್ಟ್ರೀಯ ವಿಷಯಗಳ ಕುರಿತು ಚರ್ಚೆ ನಡೆಸಲಿದ್ದಾರೆ. ಪ್ರಧಾನಮಂತ್ರಿ ಅವರು ಸೀಶೆಲ್ಸ್ ರಾಷ್ಟ್ರೀಯ ಸಂಸತ್ ಅನ್ನು ಉದ್ದೇಶಿಸಿ ಭಾಷಣ ಮಾಡಲಿದ್ದು, ಭಾರತೀಯ ಮೂಲದ ಸಮುದಾಯದ ಸದಸ್ಯರೊಂದಿಗೆ ಸಂವಾದ ನಡೆಸಲಿದ್ದಾರೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ.

**********

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಇಂದು ದೇಶದ ಮೊದಲ ಸಹಕರ ಆಧಾರಿತ ಟ್ಯಾಕ್ಸಿ ಸೇವೆ - 'ಭಾರತ್ ಟ್ಯಾಕ್ಸಿ'ಗೆ ಗುಜರಾತ್‌ನಲ್ಲಿ ಚಾಲನೆ ನೀಡಲಿದ್ದಾರೆ. 'ಭಾರತ್ ಟ್ಯಾಕ್ಸಿ' ಸಹಕಾರ ತತ್ವಗಳಡಿಯಲ್ಲಿ ಕಾರ್ಯ ನಿರ್ವಹಿಸುವ ಒಂದು ವಿನೂತನ ಡಿಜಿಟಲ್ ಸಾರಿಗೆ ವೇದಿಕೆಯಾಗಿದ್ದು, ಇದು ಸಾರಥಿಯೇ ಮಾಲಿಕ ಎಂಬ ಪರಿಕಲ್ಪನೆಗೆ ನೈಜರೂಪ ನೀಡಿದೆ. ಈ ಮಾದರಿಯಡಿ ಟ್ಯಾಕ್ಸಿ ಚಾಲಕರು ಕೇವಲ ಸೇವೆ ಒದಗಿಸುವ ಸಿಬ್ಬಂದಿಯಾಗಿ ಉಳಿಯದೆ, ಈ ಸಂಸ್ಥೆಯ ಪಾಲುದಾರರು ಹಾಗೂ ಮಾಲೀಕರು ಆಗಿರುತ್ತಾರೆ. ಇದು ಚಾಲಕರಿಗೆ ಆರ್ಥಿಕ ಸಬಲೀಕರಣ, ಸಾಮಾಜಿಕ ಭದ್ರತೆ ಮತ್ತು ಮಾಲಿಕತ್ವದ ಹಕ್ಕುಗಳನ್ನು ಒದಗಿಸುವ ಮೂಲಕ ಅವರ ಜೀವನಮಟ್ಟವನ್ನು ಸುಧಾರಿಸಲು ನೆರವಾಗಲಿದೆ.

**********

ಭಾರತ ಮತ್ತು ಯುಕೆ ನಡುವಿನ ವ್ಯಾಪಾರ ಬಾಂಧವ್ಯ ಭಾರತ-ಯುಕೆ ಸಮಗ್ರ ಆರ್ಥಿಕ ಮತ್ತು ವ್ಯಾಪಾರ ಒಪ್ಪಂದ - ಸಿಇಟಿಎ ಮೂಲಕ ಒಂದು ಐತಿಹಾಸಿಕ ಮೈಲಿಗಲ್ಲಿನತ್ತ ಸಾಗುತ್ತಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ತಿಳಿಸಿದ್ದಾರೆ. ಲಂಡನ್‌ನಲ್ಲಿ ನಿನ್ನೆ ನಡೆದ ಉದ್ಯಮ ನಾಯಕರ ಸಮಾವೇಶವನ್ನುದ್ದೇಶಿಸಿ ಮಾತನಾಡಿದ ಅವರು, ಈ ಹೊಸ ಆರ್ಥಿಕ ಒಪ್ಪಂದ ಪ್ರಗತಿಯ ಹಲವು ಬಾಗಿಲುಗಳನ್ನು ತೆರೆಯಲಿದೆ. ಆದ್ದರಿಂದ ದ್ವಿಪಕ್ಷೀಯ ಬಾಂಧವ್ಯವನ್ನು ಮತ್ತಷ್ಟು ಬಲಗೊಳಿಸಲು, ನಾವೀನ್ಯತೆಯನ್ನು ಉತ್ತೇಜಿಸಲು ಹಾಗೂ ಉಭಯ ರಾಷ್ಟ್ರಗಳ ಪರಸ್ಪರ ಸಮೃದ್ಧಿಗಾಗಿ ಉದ್ಯಮ ಸಂಸ್ಥೆಗಳು ದೊಡ್ಡ ಪ್ರಮಾಣದಲ್ಲಿ ಹೂಡಿಕೆ ಮತ್ತು ಮಹತ್ವಾಕಾಂಕ್ಷೆಯೊಂದಿಗೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

**********

ವೆನೆಜುವೆಲಾದಲ್ಲಿ ಸಂಭವಿಸಿದ ಎರಡು ಪ್ರಬಲ ಭೂಕಂಪಗಳಲ್ಲಿ ಮೃತಪಟ್ಟವರ ಸಂಖ್ಯೆ ೯೨೦ಕ್ಕೆ ಏರಿಕೆಯಾಗಿದ್ದು, ಸುಮಾರು ಮೂರು ಸಾವಿರದ ಮುನ್ನೂರು ಜನರು ಗಾಯಗೊಂಡಿದ್ದಾರೆ.  ರಾಜಧಾನಿ ಕ್ಯಾರಕಾಸ್ ಮತ್ತು ಹತ್ತಿರದ ಕರಾವಳಿ ನಗರವಾದ ಲಾ ಗ್ವೈರಾದಲ್ಲಿ ಕುಸಿದು ಬಿದ್ದಿರುವ ಕಟ್ಟಡಗಳ ಅವಶೇಷಗಳ ಅಡಿಯಲ್ಲಿ ಸಿಲುಕಿರುವ ಜನರನ್ನು ರಕ್ಷಿಸಲು ರಕ್ಷಣಾ ಸಿಬ್ಬಂದಿ ತೀವ್ರ ಕಾರ್ಯಾಚರಣೆ ನಡೆಸುತ್ತಿದ್ದಾರೆ. ಮೊದಲು ರಿಕ್ಟರ್ ಮಾಪಕದಲ್ಲಿ ೭.೨ ತೀವ್ರತೆಯ ಭೂಕಂಪ ಸಂಭವಿಸಿದ್ದು, ಅದರ ಬೆನ್ನಲ್ಲೇ ಸೆಕೆಂಡುಗಳ ಅಂತರದಲ್ಲಿ ಮತ್ತಷ್ಟು ಪ್ರಬಲವಾದ ೭.೫ ತೀವ್ರತೆಯ ಭೂಕಂಪ ಸಂಭವಿಸಿದೆ. ಇವೆರಡೂ ಭೂಕಂಪನಗಳು ಭೂಮಿಯ ಮೇಲ್ಮೈಗೆ ಹತ್ತಿರದಲ್ಲೇ ಸಂಭವಿಸಿರುವುದರಿಂದ ವಿನಾಶದ ತೀವ್ರತೆ ಹೆಚ್ಚಾಗಿದೆ. ಪರಿಸ್ಥಿತಿಯನ್ನು ಎದುರಿಸಲು ದೇಶದ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಅವರು ತುರ್ತು ಪರಿಸ್ಥಿತಿ ಘೋಷಿಸಿದ್ದಾರೆ. ಭಾರತ ಸರ್ಕಾರ ಆಪರೇಷನ್ ಅಮಿಸ್ಟಾಡ್ ಮೂಲಕ ವೆನೆಜುವೆಲಾಗೆ ನೆರವು ನೀಡಲು ಮುಂದಾಗಿದೆ. ಈ ಕಾರ್ಯಾಚರಣೆಯಡಿಯಲ್ಲಿ, ಭಾರತೀಯ ವಾಯುಸೇನೆಯ ಎರಡು ಎಂಸಿಸಿ, ಸಿ-೧೭ ವಿಮಾನಗಳು ಅಗತ್ಯ ಪರಿಹಾರ ಸಾಮಗ್ರಿಗಳೊಂದಿಗೆ ನಿನ್ನೆ ವೆನೆಜುವೆಲಾಕ್ಕೆ ಪ್ರಯಾಣ ಬೆಳೆಸಿದವು.  ಈ ತುರ್ತು ನೆರವು ಕಾರ್ಯಾಚರಣೆಯು ಭಾರತೀಯ ಸೇನೆಯ ತಾತ್ಕಾಲಿಕ ಆಸ್ಪತ್ರೆ ಘಟಕ ಮತ್ತು ಎರಡು ಭೀಷ್ಮ ಕ್ಯೂಬ್ಸ್ ಒಳಗೊಂಡಂತೆ ೩೫ ಟನ್‌ಗೂ ಹೆಚ್ಚು ಪರಿಹಾರ ಸಾಮಗ್ರಿಗಳು, ಔಷಧಗಳು ಹಾಗೂ ವೈದ್ಯಕೀಯ ಉಪಕರಣಗಳನ್ನು ಒಳಗೊಂಡಿದೆ. ಕಷ್ಟದ ಸಮಯದಲ್ಲಿ ಭಾರತವು ತೋರಿರುವ ಸಹಾಯಹಸ್ತಕ್ಕೆ ಹಂಗಾಮಿ ಅಧ್ಯಕ್ಷೆ ಡೆಲ್ಸಿ ರೊಡ್ರಿಗಸ್ ಕೃತಜ್ಞತೆ ಸಲ್ಲಿಸಿದ್ದಾರೆ.

**********

ಹಾರ್ಮೂಜ್ ಜಲಸಂಧಿಯಲ್ಲಿ ಕಂಟೈನರ್ ಹಡಗಿನ ಮೇಲೆ ನಡೆದ ಡ್ರೋಣ್ ದಾಳಿಗೆ ಪ್ರತಿಕ್ರಿಯೆಯಾಗಿ ಅಮೆರಿಕ ಇರಾನ್‌ನ ಕ್ಷಿಪಣಿ ಮತ್ತು ಡ್ರೋಣ್ ಉಡಾವಣಾ ನೆಲೆಗಳು ಹಾಗೂ ರಾಡಾರ್ ಕೇಂದ್ರಗಳ ಮೇಲೆ ವೈಮಾನಿಕ ದಾಳಿ ನಡೆಸಿದೆ. ಕದನ ವಿರಾಮ ಒಪ್ಪಂದ ಉಲ್ಲಂಘಿಸಿರುವ ಇರಾನ್, ಇದರ ಪರಿಣಾಮ ಎದುರಿಸಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಎಚ್ಚರಿಸಿದ್ದಾರೆ. ಈ ಪ್ರತಿ ದಾಳಿಗೆ ತಕ್ಷಣದ ಮತ್ತು ನಿರ್ಣಾಯಕ ತಿರುಗೇಟು ನೀಡಲಾಗುವುದು ಎಂದು ಇರಾನ್ ಸೇನಾ ವಕ್ತಾರ ಇಬ್ರಾಹಿಂ ಅಲ್‌ಫಿಕಾರ್ ಪ್ರತ್ಯುತ್ತರ ನೀಡಿದ್ದಾರೆ. ಇದಕ್ಕೂ ಮುನ್ನ ಒಮನ್ ಕರಾವಳಿಯಲ್ಲಿ ವಾಣಿಜ್ಯ ಹಡಗಿನ ಮೇಲೆ ನಡೆದ ದಾಳಿಯ ಹಿನ್ನೆಲೆಯಲ್ಲಿ ಅಂತಾರಾಷ್ಟ್ರೀಯ ಕಡಲ ಸಂಸ್ಥೆ - ಐಎಂಒ, ಈ ಮಾರ್ಗದಲ್ಲಿ ಸಿಲುಕಿರುವ ಹಡಗುಗಳ ಸ್ಥಳಾಂತರ ಕಾರ್ಯಾಚರಣೆಯನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಸಿದೆ.

**********

ಇಸ್ರೇಲ್ ಮತ್ತು ಲೆಬನಾನ್ ನಡುವೆ ದೀರ್ಘಕಾಲಿನ ಶಾಂತಿ ಮತ್ತು ಭದ್ರತೆಯನ್ನು ಸ್ಥಾಪಿಸುವ ನಿಟ್ಟಿನಲ್ಲಿ ಅಮೆರಿಕದ ಮಧ್ಯಸ್ಥಿಕೆಯುಳ್ಳ ಮಹತ್ವದ ಸಹಮತ ಸೂತ್ರವನ್ನು ಅಮೆರಿಕ ವಿದೇಶಾಂಗ ಕಾರ್ಯದರ್ಶಿ ಮಾರ್ಕೋ ರೂಬಿಯೋ ಪ್ರಕಟಿಸಿದ್ದಾರೆ. ಈ ಪ್ರಸ್ತಾವಿತ ಒಪ್ಪಂದದಡಿಯಲ್ಲಿ ಕದನ ವಿರಾಮ ಜಾರಿಗೆ ಬರಲಿದ್ದು, ಇದಕ್ಕಾಗಿ ಹಿಜ್ಬುಲ್ಲಾ ಸಂಘಟನೆಯು ಇಸ್ರೇಲ್ ಮೇಲಿನ ಎಲ್ಲಾ ದಾಳಿಗಳನ್ನೂ ನಿಲ್ಲಿಸಿ, ದಕ್ಷಿಣ ಲೆಬನಾನ್‌ನಿಂದ ಸಂಪೂರ್ಣವಾಗಿ ಹಿಂದೆ ಸರಿಯಬೇಕಾಗುತ್ತದೆ. ಈ ಒಪ್ಪಂದ ಆ ಪ್ರದೇಶದಲ್ಲಿ ಸ್ಥಿರತೆಯನ್ನು ಮರು ಸ್ಥಾಪಿಸುವ ನಿಟ್ಟಿನಲ್ಲಿ ಮೊದಲ ಹೆಜ್ಜೆಯಾಗಿದೆ ಎಂದು ಮಾರ್ಕೋ ರೂಬಿಯೋ ಬಣ್ಣಿಸಿದ್ದಾರೆ.

**********

ಜಮ್ಮು ಮತ್ತು ಕಾಶ್ಮೀರದಲ್ಲಿ, ಜುಲೈ ೩ ರಿಂದ ಪ್ರಾರಂಭವಾಗುವ ವಾರ್ಷಿಕ ಅಮರನಾಥ ಯಾತ್ರೆಗೆ ಮುಂಚಿತವಾಗಿ, ಜಮ್ಮು ಜಿಲ್ಲೆಯಾದ್ಯಂತ ವ್ಯಾಪಕವಾದ ಗಸ್ತು, ಮತ್ತು ಶೋಧ ಕಾರ್ಯಾಚರಣೆಗಳನ್ನು ನಡೆಸುವ ಮೂಲಕ ಭದ್ರತಾ ಪಡೆಗಳು ಸಿದ್ಧತೆಗಳನ್ನು ತೀವ್ರಗೊಳಿಸಿವೆ. ಗಡಿ ಕಣ್ಗಾವಲು ಬಲಪಡಿಸಲು ಮತ್ತು ಸಮಾಜ ವಿರೋಧಿ ಚಟುವಟಿಕೆಗಳನ್ನು ತಡೆಯಲು ಪೊಲೀಸರು, ಸಿಐಎಸ್‌ಎಫ್

ಮತ್ತು ಬಿಎಸ್‌ಎಫ್  ಪಡೆಗಳ ಜೊತೆಗೆ, ಅರ್ನಿಯಾ ಗಡಿ ಪ್ರದೇಶದಲ್ಲಿ ಗಸ್ತುಕಾರ್ಯ ನಡೆಸಿದ್ದಾರೆ. ಮತ್ತೊಂದು ಕಾರ್ಯಾಚರಣೆಯಲ್ಲಿ, ಮುಂಬರುವ ಯಾತ್ರೆಯ ಸಮಯದಲ್ಲಿ ಯಾತ್ರಾರ್ಥಿಗಳು ಮತ್ತು ಸಾರ್ವಜನಿಕರಿಗೆ ಸುರಕ್ಷಿತ ವಾತಾವರಣವನ್ನು ಖಚಿತಪಡಿಸಿಕೊಳ್ಳಲು ಪೊಲೀಸರು ಮತ್ತು ಸಿಆರ್‌ಪಿಎಫ್ ಜಮ್ಮು-ಶ್ರೀನಗರ ರಾಷ್ಟ್ರೀಯ ಹೆದ್ದಾರಿಯ ಕಟಲ್ ಬಟಾಲ್, ತಹ್ರಾ ಮತ್ತು ಬಜಾಲ್ಟಾ ರೈಲು ನಿಲ್ದಾಣ ಪ್ರದೇಶದಲ್ಲಿ ಶೋಧ ಕಾರ್ಯಾಚರಣೆಗಳನ್ನು ನಡೆಸಿದರು. ಈ ನಡುವೆ ಜಮ್ಮು ಮತ್ತು ಕಾಶ್ಮೀರ ಪೊಲೀಸರು ಅಮರನಾಥ ಯಾತ್ರಾ ಮಾರ್ಗದ ಸುತ್ತ-ಮುತ್ತ ಮೇಲ್ವಿಚಾರಣೆಗಾಗಿ ತಂತ್ರಜ್ಞಾನ ಆಧಾರಿತ ಕಣ್ಗಾವಲು ಉಪಕ್ರಮ "ಪ್ರಾಜೆಕ್ಟ್ ಹಾಕ್ ಐ" ಅನ್ನು ಪ್ರಾರಂಭಿಸಿದ್ದಾರೆ. ಮುಂಬರುವ ಅಮರನಾಥ ಯಾತ್ರೆಗಾಗಿ ವಿಸ್ತೃತ ಭದ್ರತಾ ಗ್ರಿಡ್‌ನ ಭಾಗವಾಗಿ ಅನಂತನಾಗ್ ಪೊಲೀಸರು ಈ ಉಪಕ್ರಮವನ್ನು ಅನಾವರಣಗೊಳಿಸಿದ್ದಾರೆ

**********

ಆಕಾಶವಾಣಿಯ ಜನಪ್ರಿಯ ಮಾಸಿಕ ಕಾರ್ಯಕ್ರಮ 'ಮನ್ ಕಿ ಬಾತ್'ನಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರು, ನಾಳೆ ಬೆಳಗ್ಗೆ ೧೧ ಗಂಟೆಗೆ ದೇಶ ವಿದೇಶಗಳಲ್ಲಿರುವ ಭಾರತೀಯರನ್ನುದ್ದೇಶಿಸಿ ಮಾತನಾಡಲಿದ್ದಾರೆ. ಇದು ಮನ್ ಕಿ ಬಾತ್‌ನ ೧೨೫ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲಾ ವಾಹಿನಿಗಳು, ಆಕಾಶವಾಣಿ ಸುದ್ದಿ ಜಾಲತಾಣ ಮತ್ತು ನ್ಯೂಸ್ ಆನ್ ಏರ್ ಮೊಬೈಲ್ ಅಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ.  ಈ ಕಾರ್ಯಕ್ರಮ ಆಕಾಶವಾಣಿ, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಚೇರಿ ಹಾಗೂ ವಾರ್ತಾ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿಯೂ ನೇರ ಪ್ರಸಾರ ಮಾಡಲಾಗುತ್ತದೆ. ಹಿಂದಿ ಪ್ರಸಾರದ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರಗೊಳ್ಳಲಿದೆ.

**********

ಲಂಡನ್‌ನಲ್ಲಿ ನಡೆದ ಎಫ್‌ಐಎಚ್ ಪುರುಷರ ಪ್ರೋ ಲೀಗ್ ಹಾಕಿ ಪಂದ್ಯದಲ್ಲಿ ಭಾರತ ತಂಡ ಪಾಕಿಸ್ತಾನವನ್ನು ೭-೧ ಗೋಲುಗಳ ಭಾರೀ ಅಂತರದಿಂದ ಮಣಿಸಿದೆ. ಪಂದ್ಯದ ಆರಂಭದಲ್ಲೇ ಪಾಕಿಸ್ತಾನದ ಅಬು ಬಕ್ಕರ್ ಗೋಲುಗಳಿಸಿ ಮುನ್ನಡೆ ತಂದುಕೊಟ್ಟರಾದರೂ, ನಂತರ ಭಾರತ ಪ್ರಬಲ ಸ್ಪರ್ಧೆ ನೀಡಿ, ಏಳು ಆಟಗಾರರು ತಲಾ ಒಂದು ಗೋಲುಗಳಿಸಿ, ಭಾರೀ ಮುನ್ನಡೆಯಲ್ಲಿ ಪಂದ್ಯವನ್ನು ಗೆದ್ದುಕೊಂಡರು. ಭಾರತ ತಂಡ ನಾಳೆ ನಡೆಯಲಿರುವ ತನ್ನ ಮುಂದಿನ ಪಂದ್ಯದಲ್ಲಿ ಇಂಗ್ಲೆಂಡ್ ತಂಡವನ್ನು ಎದುರಿಸಲಿದೆ.

**********

ಅಮೆರಿಕದ ಮ್ಯಾಸಚೂಸೆಟ್ಸ್‌ನ ಬಾಸ್ಟನ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಫಿಫಾ ವಿಶ್ವಕಪ್ ಫುಟ್ಬಾಲ್ ಪಂದ್ಯಾವಳಿಯ 'ಐ' ಗುಂಪಿನ ಪಂದ್ಯದಲ್ಲಿ ಫ್ರಾನ್ಸ್ ತಂಡ ನಾರ್ವೆ ವಿರುದ್ಧ ೪-೧ ಗೋಲುಗಳ ಗೆಲುವು ದಾಖಲಿಸಿದೆ.   ಫ್ರಾನ್ಸ್ ಪರ ಉಸ್ಮಾನೆ ಡೆಂಬೆಲೆ, ಪಂದ್ಯದ ಮೊದಲಾರ್ಧದಲ್ಲೇ ತ್ರಿವಳಿ ಗೋಲುಗಳನ್ನು ಗಳಿಸಿ, ತಂಡ ಐ ಗುಂಪಿನಲ್ಲಿ ಅಗ್ರಸ್ಥಾನ ಪಡೆಯಲು ನೆರವಾದರು. ಇದೇ ಗುಂಪಿನ ಮತ್ತೊಂದು ಪಂದ್ಯದಲ್ಲಿ ಸೆನೆಗಲ್ ತಂಡ, ಇರಾಕ್ ವಿರುದ್ಧ ೫-೦ ಗೋಲುಗಳ ಜಯ ಸಾಧಿಸಿತು.

******END****